**MAY 11, 2026**

**AKASHAVANI - DHARWAD**

**PRADESH SAAMACHARA (KANNADA) 07.05 A.M**

**ಮುಖ್ಯಾಂಶಗಳು**

- **ರಾಷ್ಟ್ರದ ಸಮಸ್ಯೆಗಳನ್ನು ಒಗ್ಗಟ್ಟಿನಿಂದ ಎದುರಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಜನತೆಗೆ ಕರೆ.**
- **ಯುವ ಸಮುದಾಯದಲ್ಲಿ ಕ್ರೀಡಾ ಸಂಸ್ಕೃತಿ ಉತ್ತೇಜಿಸುವುದು ಸರ್ಕಾರದ ಗುರಿ – ಗೃಹ ಸಚಿವ ಡಾಕ್ಟರ್ ಜಿ. ಪರಮೇಶ್ವರ.**
- **ಸಚಿವ ಡಿ.ಸುಧಾಕರ ನಿಧನ; ಇಂದು ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯ ಸಂಸ್ಕಾರ.**
- **ಇಂದು ರಾಷ್ಟ್ರೀಯ ತಂತ್ರಜ್ಞಾನ ದಿನ.**

**ಈಗ ವಾರ್ತೆಗಳ ವಿವರ**

**ಮಧ್ಯಪ್ರಾಚ್ಯ ಸಂಘರ್ಷದಿಂದ ಉಂಟಾಗಿರುವ ಪರಿಣಾಮಗಳನ್ನು ದೇಶವಾಸಿಗಳು** ಒಗ್ಗಟ್ಟಿನಿಂದ ಎದುರಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಬಿಜೆಪಿ ಕಾರ್ಯಕರ್ತರ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ದೇಶ ಎದುರಿಸುತ್ತಿರುವ ಎಲ್ಲ ಸಮಸ್ಯೆಗಳನ್ನು ಕೋವಿಡ್ ಕಾಲದಲ್ಲಿ ಎದುರಿಸಿದಂತೆ ದೇಶವಾಸಿಗಳು ಒಗ್ಗಟ್ಟಾಗಿ ಎದುರಿಸಬೇಕಾದ ಅಗತ್ಯವಿದೆ. ಪ್ರಸಕ್ತ ಮಧ್ಯಪ್ರಾಚ್ಯದ ಸಂಘರ್ಷದ ಪರಿಣಾಮವಾಗಿ, ಇಡೀ ವಿಶ್ವವೇ ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸಂಯಮ ಅಗತ್ಯವಾಗಿದೆ. ಸಂಪನ್ಮೂಲಗಳ ಮಿತ ಉಪಯೋಗ ಮಾಡಬೇಕಾಗಿದೆ ಎಂದು ಕರೆ ನೀಡಿದರು.

<><><>

**ಪ್ರಧಾನಮಂತ್ರಿಗಳ ನಿಗದಿತ ಸಂಚಾರದ** ರಸ್ತೆಯಲ್ಲೇ ಜಿಲೆಟಿನ್ ಕಡ್ಡಿಗಳು ಪತ್ತೆಯಾಗಿರುವುದು, ಗಂಭೀರ ಭದ್ರತಾ ಲೋಪ ಮಾತ್ರವಲ್ಲ, ಇದು ಕಾನೂನು ಸುವ್ಯವಸ್ಥೆ ಹೊಣೆ ಹೊತ್ತಿರುವ ರಾಜ್ಯದ ಕಾಂಗ್ರೆಸ್ ಸರಕಾರದ ಅಕ್ಷಮ್ಯ ಮತ್ತು ಗಂಭೀರ ವೈಫಲ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಆಳ್ವಿಕೆಯಲ್ಲಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ, ಭದ್ರತೆ ಸಂಪೂರ್ಣ ಕುಸಿದಿದೆ. ಅದೂ ಕೂಡ ರಾಜಧಾನಿ ಬೆಂಗಳೂರಿನಲ್ಲಿ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಖಂಡಿಸಿದ್ದಾರೆ. ಗರಿಷ್ಠ ಭದ್ರತೆ ನೀಡಬೇಕಾದ ದೇಶದ ಆದರಣೀಯ ಪ್ರಧಾನಮಂತ್ರಿಗಳ ಸುರಕ್ಷತೆ ವಿಷಯದಲ್ಲಿ, ಕಿಂಚಿತ್ ಲೋಪಕ್ಕೂ ಅವಕಾಶ ಇರಕೂಡದು. ಇಂತಹ ಸೂಕ್ಷ್ಮ, ಗಂಭೀರ ವಿಷಯವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ, ಶೀಘ್ರದಲ್ಲಿ ಕೂಲಂಕುಶ ತನಿಖೆ ನಡೆಸಿ, ಕೃತ್ಯದ ಹಿಂದಿನ ದುಷ್ಕರ್ಮಿಗಳನ್ನು ಪತ್ತೆ ಮಾಡಿ ಶಿಕ್ಷಿಸುವುದು ಮಾತ್ರವಲ್ಲ, ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

<><><>

**ಯುವ ಸಮುದಾಯದಲ್ಲಿ ಕ್ರೀಡಾ ಸಂಸ್ಕೃತಿಯನ್ನು** ಉತ್ತೇಜಿಸುವುದು ಹಾಗೂ ತುಮಕೂರನ್ನುಕ್ರೀಡಾ ಕೇಂದ್ರವನ್ನಾಗಿ ರೂಪಿಸುವುದು ಸರ್ಕಾರದ ಗುರಿಯಾಗಿದೆ ಎಂದು ಗೃಹ ಖಾತೆ ಸಚಿವರೂ ಆಗಿರುವ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಜಿ. ಪರಮೇಶ್ವರ ಹೇಳಿದ್ದಾರೆ. ತುಮಕೂರು ವಿಶ್ವವಿದ್ಯಾಲಯ ಆವರಣದಲ್ಲಿರುವ ಜಿಲ್ಲಾ ಟೆನಿಸ್ ಕ್ರೀಡಾಂಗಣದಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ಓಪನ್ ಟೆನಿಸ್ ಕ್ರೀಡಾಕೂಟದಲ್ಲಿ ಬಹುಮಾನ ವಿತರಿಸಿ ಅವರು ಮಾತನಾಡಿದರು. ಮಾದಕ ದ್ರವ್ಯ ಮುಕ್ತ ರಾಜ್ಯ ನಿರ್ಮಾಣವೂ ಸರ್ಕಾರದ ಗುರಿಯಾಗಿದ್ದು, ಯುವಕರನ್ನು ಸಕಾರಾತ್ಮಕ ಚಟುವಟಿಕೆಗಳತ್ತ ತೊಡಗಿಸುವ ಅತ್ಯುತ್ತಮ ಮಾರ್ಗ ಕ್ರೀಡೆ.

ಕ್ರೀಡಾಪಟುಗಳಿಗೆ ಅಗತ್ಯ ಮೂಲಸೌಕರ್ಯ ಮತ್ತು ಅವಕಾಶಗಳನ್ನು ಹೆಚ್ಚಿಸುವ ಮೂಲಕ ತುಮಕೂರನ್ನು ಕ್ರೀಡಾ ನಗರವನ್ನಾಗಿ ರೂಪಿಸುವ ಯೋಜನೆಗೆ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು.

<><><>

**ಸರ್ಕಾರವು, ಯೋಜನಾ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.** ಸುಧಾಕರ್ ಅವರ ನಿಧನದ ಹಿನ್ನೆಲೆಯಲ್ಲಿ ಇಂದು ಚಿತ್ರದುರ್ಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಕಚೇರಿಗಳು, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಹಾಗೂ ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸಾರ್ವಜನಿಕ ರಜೆ ಘೋಷಣೆ ಮಾಡಿದೆ. ಹಾಗೆಯೇ ನಿನ್ನೆಯಿಂದ ಮೂರು ದಿನಗಳ ಕಾಲ ರಾಜ್ಯಾದ್ಯಂತ ಶೋಕಾಚರಣೆಯನ್ನು ಆಚರಿಸುವ ಜೊತೆಗೆ ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ನಿಯಮಿತವಾಗಿ ಹಾರಿಸಲ್ಪಡುವ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು ಎಂದು ಸರ್ಕಾರವು ಹೊರಡಿಸಿರುವ ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಇಂದು ಚಳ್ಳಕೆರೆಯಲ್ಲಿ ಸಂಜೆ 4 ಗಂಟೆಗೆ ಸಕಲ ಸರ್ಕಾರಿ ಗೌರವದೊಂದಿಗೆ ಅವರ ಅಂತಿಮ ಸಂಸ್ಕಾರ ನಡೆಯಲಿದೆ. **ಧಾರವಾಡ ಆಕಾಶವಾಣಿ ಕೇಂದ್ರ, ಇಂದು ನಗರ**ದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ, ಆಕಾಶವಾಣಿ 90 ನೇ ವರ್ಷಾಚರಣೆ ಹಿನ್ನೆಲೆ ಆಯೋಜಿಸಿದ್ದ 'ಸಂಧ್ಯಾ ಸುಧೆ' ಶಾಸ್ತ್ರೀಯ ಸಂಗೀತ ಕಾರ್ಯಕ್ರಮವನ್ನು ಮುಂದೂಡಿದೆ. ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ ಅವರ ನಿಧನ ಹಾಗೂ ರಾಜ್ಯ ಸರ್ಕಾರ ಘೋಷಿಸಿದ ಶೋಕಾಚರಣೆ ಹಿನ್ನೆಲೆ ಮುಂದೂಡಲಾಗಿದೆ ಎಂದು ಕಾರ್ಯಕ್ರಮ ವಿಭಾಗದ ಮುಖ್ಯಸ್ಥರಾದ ಮಂಜುಳಾ ಪುರಾಣಿಕ್ ತಿಳಿಸಿದ್ದಾರೆ.

<><><>

**ದೇಶದಲ್ಲೇ ಮೊದಲ ಬಾರಿಗೆ ಗಿಗ್ ಕಾರ್ಮಿಕರ** ಕಲ್ಯಾಣಕ್ಕೆ ಕಾಯ್ದೆ ಜಾರಿ ಮಾಡುವಮೂಲಕ ಮಾದರಿಯಾಗಿರುವ ರಾಜ್ಯ ಸರ್ಕಾರ, ಇದೀಗ ಗಿಗ್ ಕಾರ್ಮಿಕರ ಕುಂದುಕೊರತೆಗಳನ್ನು ಆಲಿಸಲು ವಿಶೇ ’ ಡಿಜಿಟಲ್ ವೇದಿಕೆಯನ್ನು ಕಲ್ಪಿಸಿದೆ ಎಂದು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ. ವೇತನ, ರಜೆ, ದುಡಿಯುವ ಸ್ಥಿತಿಗತಿ ಸೇರಿ, ಏನೇ ಸಮಸ್ಯೆಗಳಿದ್ದರೂ ದೂರ ನೀಡಬಹುದು. ಸಂಬಂಧಪಟ್ಟ ಕಂಪನಿಗೆ ದೂರನ್ನು ವರ್ಗಾವಣೆ ಮಾಡಿ ಪರಿಹಾರ ಒದಗಿಸಲಾಗುವುದು. ನೋಂದಣಿ, ಪರಿಹಾರ ಮತ್ತಿತರ ನೆರವಿಗಾಗಿ, ಕಾರ್ಮಿಕ ಸಹಾಯವಾಣಿ 1–5–5–2–1–4 ಕ್ಕೆ ಸಂಪರ್ಕಿಸಬಹುದು ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದೆ.

<><><>

**‘ಸಮಗ್ರ ಬೆಳವಣಿಗೆಗೆ ಜವಾಬ್ದಾರಿಯುತ ನಾವೀನ್ಯತೆ’ ಎಂಬ** ಧ್ಯೇಯವಾಕ್ಯದೊಂದಿಗೆ ಇಂದು ರಾಷ್ಟ್ರೀಯ ತಂತ್ರಜ್ಞಾನ ದಿನ ಆಚರಿಸಲಾಗುತ್ತದೆ. ಭಾರತದಲ್ಲಿ ಪ್ರತಿ ವ ´ ಮೇ 11 ರಂದು ರಾಷ್ಟ್ರೀಯ ತಂತ್ರಜ್ಞಾನ ದಿನವನ್ನು ಆಚರಿಸಲಾಗುತ್ತದೆ. ಈ ದಿನವು 1998 ರಲ್ಲಿ ರಾಜಸ್ಥಾನದ ಪೋಖ್ರಾನ್‌ನಲ್ಲಿ, ಆಪರೇ ’ನ್ ಶಕ್ತಿ ಅಡಿಯಲ್ಲಿ ಭಾರತ ನಡೆಸಿದ ಯಶಸ್ವಿ ಪರಮಾಣು ಪರೀಕ್ಷೆಗಳನ್ನು ನೆನಪಿಸುತ್ತದೆ. ಇದೇ ದಿನ ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ‘ಹಂಸ–3’ ವಿಮಾನವು ಮೊದಲ ಹಾರಾಟ ನಡೆಸಿತು ಮತ್ತು ತ್ರಿಶೂಲ್ ಕ್ಷಿಪಣಿಯನ್ನು ಸಹ ಪರೀಕ್ಷಿಸಲಾಯಿತು. ಇದು ಭಾರತದ ವಿಜ್ಞಾನಿಗಳು ಮತ್ತು ಎಂಜಿನಿಯರ್‌ಗಳ ಸಾಧನೆಗಳನ್ನು ಗೌರವಿಸುವ ದಿನವಾಗಿದೆ.ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರು ಈ ದಿನವನ್ನು ಮೊದಲ ಬಾರಿಗೆ ಘೋಷಿಸಿದರು. ಈ ದಿನವು ಭಾರತದ ತಾಂತ್ರಿಕ ಸಾಮರ್ಥ್ಯವನ್ನು ಮತ್ತು ನಾವೀನ್ಯತೆಯನ್ನು ಎತ್ತಿ ತೋರಿಸುತ್ತದೆ.

<><><>

**ಈಗ ಪ್ರಕಟಣೆ.**

**ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..**

<><><>

**( 42 ಸೆಕೆಂದುಗಳು)**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

**<><><>**

**ದೇಶದಲ್ಲಿ ನೈಸರ್ಗಿಕ ಕೃಷಿಯನ್ನು** ಉತ್ತೇಜಿಸಲು ಆರಂಭಿಸಲಾದ ಎನ್.ಎಂ.ಎಫ್.ಎಲ್– ನ್ಯಾಶನಲ್ ಮಿಶನ್ ಆನ್ ನ್ಯಾಚುರಲ್ ಫಾರ್ಮಿಂಗ್, ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಕಲಬುರಗಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿದ್ದು, ವಿವಿಧ ಕ್ಲಸ್ಟರಗಳಡಿ, ಸುಮಾರು 4 ಸಾವಿರ ಎಕರೆ ಪ್ರದೇಶದಲ್ಲಿ ಜಾರಿಗೊಂಡಿದೆ. ಈ ಕುರಿತು ಒಂದು ವರದಿ.

***ಕೇಂದ್ರ ಕೃಷಿ ಸಚಿವಾಲಯ, 2024, ನವೆಂಬರನಿಂದ, ನ್ಯಾಶನಲ್ ಮಿಶನ್ ಆನ್ ನ್ಯಾಚುರಲ್ ಫಾರ್ಮಿಂಗ್–ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಜಾರಿಗೆ ತಂದಿದೆ. ಕಲಬುರಗಿ ಜಿಲ್ಲೆಯಲ್ಲಿ ತರಬೇತಿ ಪಡೆದ ಒಟ್ಟು 80 ಕೃಷಿ ಸಖಿಯರು ರೈತರಿಗೆ ನೈಸರ್ಗಿಕ ಕೃಷಿ ಬಗ್ಗೆ ಮಾಹಿತಿ, ಪ್ರಾತ್ಯಕ್ಷಿಕೆಗಳನ್ನು ನೀಡಿ ಪ್ರೋತ್ಸಾಹಿಸುತ್ತಿದ್ದಾರೆ. 27 ಜೈವಿಕ ಸಂಪನ್ಮೂಲ ಕೇಂದ್ರಗಳನ್ನು ನಿರ್ಮಿಸಿ ಎರೆಹುಳು ಗೊಬ್ಬರ, ಜೀವಾಮೃತ ಸೇರಿದಂತೆ ಜೈವಿಕ ಗೊಬ್ಬರವನ್ನು ತಯಾರಿಸಲಾಗುತ್ತಿದೆ. ರೈತರಿಗೆ ಹೆಕ್ಟರ ಒಂದಕ್ಕೆ ಎರಡೂವರೆ ಸಾವಿರ ರೂಪಾಯಿ ಸಹಾಯಧನವನ್ನು ನೀಡಲಾಗುತ್ತಿದೆ.ಜಿಲ್ಲೆಯಲ್ಲಿ ಒಟ್ಟು 2 ಸಾವಿರ ಹೆಕ್ಟರ ಪ್ರದೇಶದಲ್ಲಿ, ನೈಸರ್ಗಿಕ ಕೃಷಿ ಗುರಿ ಹೊಂದಲಾಗಿದ್ದು, ಈ ಕುರಿತು ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಕಲಬುರಗಿ ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಸಮದ ಪಟೇಲ್...***

**<><><>**

**ಧ್ವನಿ–ಸಮದ ಪಟೇಲ್ ( 110 ಸೆಕೆಂದುಗಳು)**

**<><><>**

**ಅವ್ವ ಎನ್ನುವ ಎರಡಕ್ಷರ ತಮ್ಮ ಪಾಲಿಗೆ ಕೇವಲ** ಹೆಸರಲ್ಲ, ಅದು ತಮ್ಮ ಬದುಕಿನ ಅಕ್ಷಯ ಚೈತನ್ಯ. ಎದೆಯ ಒರತೆಯಲ್ಲಿ ಸದಾಕಾಲ ತಿಳಿನೀರಿನ ಬುಗ್ಗೆಯಂತೆ ಉಕ್ಕುವ ಅವ್ವನ ನೆನಪುಗಳೇ ತಮ್ಮ ಜೀವನದ ದಾರಿದೀಪ. ತಮ್ಮ ಪ್ರತಿ ದಿನ ಆರಂಭವಾಗುವುದೇ ಅವ್ವನ ಸ್ಮರಣೆಯಿಂದ. ಬಾಲ್ಯದಲ್ಲಿ ಅವ್ವ ಹಾಡುತ್ತಿದ್ದ ಆ ಜೋಗುಳದ ಮಧುರ ಧ್ವನಿ ಇಂದಿಗೂ ತಮ್ಮ ಕಿವಿಯಲ್ಲಿ ರಿಂಗಣಿಸುತ್ತಿದೆ. ಮನಸ್ಸಿಗೆ ನೆಮ್ಮದಿ ನೀಡುತ್ತಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಎಸ್ ಹೊರಟ್ಟಿ ಹೇಳಿದ್ದಾರೆ. ವಿಶ್ವ ತಾಯಂದಿರ ದಿನದ ಅಂಗವಾಗಿ ಬೆಂಗಳೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅವ್ವ ತಮ್ಮ ಪಾಲಿನ ಸರ್ವಸ್ವ ಅವಳು ಸದಾ ಕಾಯುವ ಶಕ್ತಿ. ಪ್ರೀತಿಯಿಂದ ಕಾಡುವ ಮಮತೆ. ತಾಯಿಯ ಪ್ರೀತಿ ಮತ್ತು ತ್ಯಾಗಕ್ಕೆ ಪ್ರತಿಯಾಗಿ ನಾವು ಏನನ್ನೂ ನೀಡಿದರೂ ಅದು ಕಡಿಮೆಯೇ. ಈ ಜನ್ಮವಷ್ಟೇ ಅಲ್ಲ ನೂರು ಜನ್ಮ ಎತ್ತಿ ಬಂದರೂ ತಾಯಿಯ ಋಣ ತೀರಿಸಲು ಸಾಧ್ಯವಿಲ್ಲ. ತಾಯಿಯಿಲ್ಲದ ಬದುಕು ಶೂನ್ಯ, ತಾಯಿಯನ್ನು ಗೌರವಿಸುವುದು ಎಂದರೆ ದೈವವನ್ನು ಪೂಜಿಸಿದಂತೆ. ಜಗತ್ತಿನ ಎಲ್ಲಾ ತಾಯಂದಿರಿಗೂ ಶಿರಬಾಗಿ ನಮಿಸುತ್ತಾ ವಿಶ್ವ ತಾಯಂದಿರ ದಿನಾಚರಣೆಯ ಶುಭಾಶಯಗಳನ್ನು ಕೋರುತ್ತೇನೆ ಎಂದು ತಿಳಿಸಿದರು.

**<><><>**

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ರಾಷ್ಟ್ರದ ಸಮಸ್ಯೆಗಳನ್ನು ಒಗ್ಗಟ್ಟಿನಿಂದ ಎದುರಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಜನತೆಗೆ ಕರೆ.**
- **ಯುವ ಸಮುದಾಯದಲ್ಲಿ ಕ್ರೀಡಾ ಸಂಸ್ಕೃತಿ ಉತ್ತೇಜಿಸುವುದು ಸರ್ಕಾರದ ಗುರಿ – ಗೃಹ ಸಚಿವ ಡಾಕ್ಟರ್ ಜಿ. ಪರಮೇಶ್ವರ.**
- **ಸಚಿವ ಡಿ.ಸುಧಾಕರ ನಿಧನ; ಇಂದು ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯ ಸಂಸ್ಕಾರ.**

- ಇಂದು ರಾಷ್ಟ್ರೀಯ ತಂತ್ರಜ್ಞಾನ ದಿನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>